ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMI0ACM2/32/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು–560 001.
ದಿನಾಂಕ:30–07–2022.

–:: ಸು ತ್ತೋಲೆ ::–

ವಿಷಯ: 2022–23ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ – ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ **ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

ಉಲ್ಲೇಖ:
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:18–05–2022, 26–05–2022, 10–06–2022, 21–06–2022 & 06–07–2022.
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

********

2022–23ನೇ ಸಾಲಿನ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರಥಮ ಸೆಮಿಸ್ಟರ್ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆಯಲು ದಿ:30–07–2022ರ ಒಳಗೆ ಪ್ರವೇಶ ಪಡೆಯಲು ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿತ್ತು.

ಪ್ರವೇಶಾವಧಿಯನ್ನು ವಿಸ್ತರಿಸಲು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಮನವಿ ಕೋರಿರುವುದನ್ನು ಪರಿಶೀಲಿಸಿ, ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್‌ನಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳಿಗೆ ನಿಯಮಗಳ ಪ್ರಕಾರ ಕೊನೆಯ **ದಿನಾಂಕ:13–08–2022 ರ ಒಳಗೆ ಪ್ರವೇಶ ಪಡೆಯಲು** ಹಾಗೂ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸ್‌ಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. *ಕೋವಿಡ್–19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.*

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

**ಜಂಟಿ ನಿರ್ದೇಶಕರು(ಆಡಳಿತ)**
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

*ರಾಜ್ಯದ ಸರ್ಕಾರಿ / ಅನುದಾನಿತ / ಖಾಸಗಿ – ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*

ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ ದಿ:13–08–2022ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

ಪ್ರತಿ ಮಾಹಿತಿಗಾಗಿ:–
1. ಮಾನ್ಯ ಆಯುಕ್ತರವರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ) ಇವರ ಆಪ್ತಶಾಖೆಗೆ.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಇ.ಆರ್.ಎಸ್ ವಿಭಾಗಕ್ಕೆ – ಅರ್ಹತಾ ಪ್ರಮಾಣ ಪತ್ರ ವಿತರಿಸಲು ಅಗತ್ಯ ಕ್ರಮಕ್ಕಾಗಿ.
7. ಕಛೇರಿ ಪ್ರತಿ.